# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/E 38262/23-24

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 4.12.23

## ಕಛೇರಿ ಆದೇಶ

ವಿಷಯ: ಶ್ರೀಮತಿ ಶಿಲ್ಪ ಕೆ, ಸಹಾಯಕ ಅಭಿಯಂತರರು ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಆದೇಶ ಸಂಖ್ಯೆ: ನಅಇ 62 ಎಂ.ಎನ್.ಯು 2023, ದಿನಾಂಕ: 05-06-2023
2) ಸರ್ಕಾರದ ನಗರಾಭಿವೃದ್ಧಿ ಇಲಾಖೆಯು ಆದೇಶ ಸಂಖ್ಯೆ: ನಅಇ 62 ಎಂ.ಎನ್.ಯು 2023 ದಿನಾಂಕ: 23-08-2023

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀಮತಿ ಶಿಲ್ಪ ಕೆ, ಸಹಾಯಕ ಅಭಿಯಂತರರು, ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯಪಾಲಕ ಅಭಿಯಂತರರು (ಯೋಜನೆ-ಕೇಂದ್ರ) ಕಛೇರಿಯಲ್ಲಿ ವೇತನ ಪಡೆದು, ಕಾರ್ಯಪಾಲಕ ಅಭಿಯಂತರರು (ಕೆರೆಗಳು) ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಇವರನ್ನು ಉಲ್ಲೇಖ-(1)ರ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯ ಹೊಸಕೆರೆಹಳ್ಳಿ ಕೆರೆಯ ಮಧ್ಯ ಭಾಗದಲ್ಲಿ ಅನಧಿಕೃತವಾಗಿ ಬಂಡ್ ನಿರ್ಮಿಸಲು ಕಾರಣಕರ್ತರಾಗಿರುವ ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ಸೇವೆಯಿಂದ ಅಮಾನತ್ತುಗೊಳಿಸಲಾಗಿರುತ್ತದೆ. ಹಾಗೂ ಉಲ್ಲೇಖ-(2)ರಂತೆ ಪ್ರಕರಣದ ಕುರಿತು ವಿವರವಾದ ಹಾಗೂ ಸಮಗ್ರ ತನಿಖೆ ನಡೆಸಲು ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿರುತ್ತದೆ. ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಸದರಿಯವರ ಸೇವೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಅವಶ್ಯಕತೆ ಇಲ್ಲವೆಂದು ಪರಿಗಣಿಸಿ, ಈ ಕೆಳಕಂಡ ಷರತ್ತಿಗೊಳಪಟ್ಟು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಮಾತೃ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

**ಷರತ್ತುಗಳು :-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ
2. ಮೇಲ್ಕಂಡ ಪ್ರಕರಣದಲ್ಲಿ ಸದರಿ ಅಭಿಯಂತರರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳುವ ಷರತ್ತಿಗೊಳಪಡಿಸಿದೆ.
3. ಸದರಿ ಅಭಿಯಂತರರ ವಿರುದ್ಧ ಬೇರೆ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
4. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
5. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
6. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್ ಕಾರ್ಡ್, ಹೆಲ್ಮೆಟ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮುಖ್ಯ ಮಾಹಿತಿ ಅಧಿಕಾರಿ (ಉಪ ಮುಖ್ಯ) ರವರ ಕಛೇರಿ
ಸಂಖ್ಯೆ: 927
ದಿನಾಂಕ: 14/12/2023
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

4/12
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

4/12/23 4/12/23

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ಯೋಜನೆ-ಕೇಂದ್ರ / ಕೆರೆಗಳು) ವಿಭಾಗ ರವರಿಗೆ ಕಳುಹಿಸಿದೆ.
: ಕಾರ್ಯಪಾಲಕ ಅಭಿಯಂತರರು (ಯೋಜನೆ-ಕೇಂದ್ರ/6) (ಕೆರೆಗಳು) ವಿಭಾಗ ರವರಿಗೆ ಕಳುಹಿಸಿದೆ.
: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ / ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ.
: ಸ.ಕಾ.ನಿ.ಅ (ಬಸವನಗುಡಿ) ಉಪ ವಿಭಾಗ ರವರಿಗೆ ಕಳುಹಿಸಿದೆ.
: ಮುಖ್ಯ ಲೆಕ್ಕಾಧಿಕಾರಿ / ಮುಖ್ಯ ಲೆಕ್ಕ ಪರಿಶೋಧಕರು / ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.

SDA
14/12/23